ತೋಟಗಾರಿಕೆ ಉತ್ಪನ್ನಗಳ ಮಾರಾಟ

292 (570) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :– ಮಾನ್ಯ ಕೃಷಿ ಮಾರುಕಟ್ಟೆ ಮತ್ತು ಹಜ್ ಮತ್ತು ವಕ್ಫ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಅರಸೀಕೆರೆ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ತೋಟಗಾರಿಕಾ ಉತ್ಪನ್ನಗಳನ್ನು ಮಾರಾಟ ಮಾಡಲು ವ್ಯವಸ್ಥೆ ಮಾಡಿರುವುದರಿಂದ ರೈತರಿಗೆ/ವರ್ತಕರಿಗೆ ಮೂಲಭೂತ ವ್ಯವಸ್ಥೆಗಳ ಕೊರತೆಯಿಂದ ಅವ್ಯವಸ್ಥೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರತ್ಯೇಕ ತೋಟಗಾರಿಕಾ ಉತ್ಪನ್ನಗಳ ಮಾರುಕಟ್ಟೆ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ? (ಮಾಹಿತಿ ನೀಡುವುದು)

ಶ್ರೀ ಎಸ್ ಕೆ. ಬೆಳ್ಳುಬ್ಬಿ (ಕೃಷಿ ಮಾರುಕಟ್ಟೆ ಮತ್ತು ಹಜ್ ಮತ್ತು ವಕ್ಫ್ ಸಚಿವರು):–

ಅ) ಹೌದು

ಆ) ಅರಸೀಕೆರೆ ಮಾರುಕಟ್ಟೆ ಪ್ರಾಂಗಣದಲ್ಲಿ ಪ್ರಮುಖವಾಗಿ ತೆಂಗಿನಕಾಯಿ, ಕೊಬ್ಬರಿ, ಮೆಕ್ಕೆಜೋಳ, ಸೂರ್ಯಕಾಂತಿ ಮುಂತಾದ ಉತ್ಪನ್ನಗಳ: ವಹಿವಾಟಿಗೆ ಅಗತ್ಯವಾಗುವ ಸೌಲಭ್ಯಗಳನ್ನು ಒದಗಿಸಲಾಗಿದೆ. ಹಾಗೂ ಅರಸೀಕೆರೆ ಮಾರುಕಟ್ಟೆ ಪ್ರಾಂಗಣದಲ್ಲಿ ಸ್ಥಳಾವಕಾಶ ಕೊರತೆ ಮತ್ತು ತರಕಾರಿ ವಹಿವಾಟಿನಿಂದ ಇತರೆ ಉತ್ಪನ್ನಗಳ ವಹಿವಾಟಿಗೆ ತೊಂದರೆಯಾಗುತ್ತಿರುವುದನ್ನು ಪರಿಗಣಿಸಿ ಪ್ರತ್ಯೇಕ ಹಣ್ಣು ಮತ್ತು ತರಕಾರಿ ಮಾರುಕಟ್ಟೆ ಅಭಿವೃದ್ಧಿಪಡಿಸಲು ಅಗತ್ಯವಾಗುವ ಜಮೀನನ್ನು ಖರೀದಿಸಲು ಪ್ರಸ್ತಾವನೆ ಸಲ್ಲಿಸಲು ಸಮಿತಿಗೆ ನಿರ್ದೇಶನ ನೀಡಲಾಗಿದೆ. ಜಮೀನು ದೊರೆತ ನಂತರ ಕ್ರಿಯಾ ಯೋಜನೆ ರೂಪಿಸಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ನಿರ್ಧಿಷ್ಟ ಯೋಜನೆಗಳಡಿಯಲ್ಲಿ ಅಭಿವೃದ್ಧಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಕೆಂಕೆರೆ ಆಸ್ಪತ್ರೆಯಲ್ಲಿ ಹಣ ದುರುಪಯೋಗ

291 (569) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಅರಸೀಕೆರೆ ತಾಲ್ಲೂಕು ಕೆಂಕೆರೆ ಆಸ್ಪತ್ರೆಯಲ್ಲಿ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)